ಕರ್ನಾಟಕ ಸರ್ಕಾರ

ಸಂಖ್ಯೆ : ಆಇ 06 ಟಿಎಫ್‌ಪಿ 2014.

ಕರ್ನಾಟಕ ಸರ್ಕಾರ ಸಚಿವಾಲಯ
ವಿಧಾನ ಸೌಧ,
ದಿನಾಂಕ:25-08-2015, ಬೆಂಗಳೂರು.

## ಸುತ್ತೋಲೆ

1) ಸರ್ಕಾರದಿಂದ ಮಾನ್ಯತೆ ಹೊಂದಿರುವ ಆಸ್ಪತ್ರೆಗಳನ್ನು ಹೊರತುಪಡಿಸಿ, ಮಾನ್ಯತೆ ಪಡೆಯದ ಖಾಸಗಿ ಆಸ್ಪತ್ರೆಗಳಲ್ಲಿ ರಾಜ್ಯ ಸರ್ಕಾರಿ ನೌಕರರು ಹಾಗೂ ಅವರ ಕುಟುಂಬದ ಸದಸ್ಯರುಗಳು ಚಿಕಿತ್ಸೆ ಪಡೆದಂತಹ ಸಂದರ್ಭದಲ್ಲಿ ವೈದ್ಯಕೀಯ ವೆಚ್ಚವನ್ನು ವಿಶೇಷ ಪ್ರಕರಣವೆಂದು ಪರಿಗಣಿಸಿ, ನಿರ್ದೇಶಕರು, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸೇವೆಗಳು, ಬೆಂಗಳೂರು, ಇವರು ನೀಡುವ ಅಭಿಪ್ರಾಯದಂತೆ ಕರ್ನಾಟಕ ಸರ್ಕಾರಿ ನೌಕರರ (ವೈದ್ಯಕೀಯ ಹಾಜರಾತಿ) ನಿಯಮಗಳು, 1963ರ ನಿಯಮ 31 ರಿಂದ ಪ್ರದತ್ತವಾದ ಅಧಿಕಾರವನ್ನು ಚಲಾಯಿಸಿ ನಿಯಮ 14ನ್ನು ಸಡಿಲಿಸಿ ಅರ್ಹತಾ ಮೊತ್ತ ರೂ. 2.00 ಲಕ್ಷದವರೆಗಿನ ವೈದ್ಯಕೀಯ ವೆಚ್ಚವನ್ನು ಮರುಪಾವತಿಸಲು ಸಂಬಂಧಪಟ್ಟ ಆಡಳಿತ ಇಲಾಖೆಯ ಸರ್ಕಾರದ ಪ್ರಧಾನ ಕಾರ್ಯದರ್ಶಿ/ಕಾರ್ಯದರ್ಶಿಗಳಿಗೆ ಅಧಿಕಾರವನ್ನು ಪ್ರತ್ಯಾಯೋಜಿಸಿ ಆದೇಶ ಸಂಖ್ಯೆ:ಸಿಆಸುಇ 31 ಎಸ್‌ಎಂಆರ್ 2014, ದಿನಾಂಕ:05-11-2014ನ್ನು ಹೊರಡಿಸಲಾಗಿದೆ.

2) ಈ ಆದೇಶದನ್ವಯ ಇಲಾಖಾ ಕಾರ್ಯದರ್ಶಿಗಳು ಸರ್ಕಾರದಿಂದ ಮಾನ್ಯತೆ ಪಡೆಯದ ಖಾಸಗಿ ಆಸ್ಪತ್ರೆಗಳಲ್ಲಿ ತುರ್ತು ಚಿಕಿತ್ಸೆ ಪಡೆದ ಸರ್ಕಾರಿ ನೌಕರರ ಮತ್ತು ಕುಟುಂಬದವರ ವೈದ್ಯಕೀಯ ವೆಚ್ಚವನ್ನು ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯ ನಿರ್ದೇಶಕರು ನೀಡುವ ಅಭಿಪ್ರಾಯದಂತೆ ಅರ್ಹತಾ ಮೊತ್ತ ರೂ. 2.00 ಲಕ್ಷಗಳವರೆಗೆ ಹಿಂಬರಿಸಲು ಅಧಿಕಾರ ಹೊಂದಿರುತ್ತಾರೆ. ರೂ. 2.00 ಲಕ್ಷ ಮೀರಿದ ಎಲ್ಲಾ ಪ್ರಕರಣಗಳನ್ನು ಸೂಕ್ತವಾಗಿ ಇತ್ಯರ್ಥಪಡಿಸಲು ಸಿ.ಆ.ಸು.ಇಲಾಖೆಗೆ ಅಧಿಕಾರವಿದ್ದು, ಆರ್ಥಿಕ ಇಲಾಖೆಯೊಡನೆ ಸಮಾಲೋಚನೆಯ ಅಗತ್ಯವಿಲ್ಲ. ಆದಾಗ್ಯೂ, ರೂ. 2.00 ಲಕ್ಷ ಮೀರಿದ ವೈದ್ಯಕೀಯ ವೆಚ್ಚ ಮರುಪಾವತಿ ಪ್ರಕರಣಗಳಲ್ಲಿ ಆರ್ಥಿಕ ಇಲಾಖೆಯ ಅನುಮೋದನೆ ಅಗತ್ಯವಿದೆ ಎಂದು ಭಾವಿಸಿ ಹಲವಾರು ಪ್ರಸ್ತಾವನೆಗಳನ್ನು ಆರ್ಥಿಕ ಇಲಾಖೆಗೆ ಕಳುಹಿಸಲಾಗುತ್ತಿದೆ.

3) ಆದ್ದರಿಂದ, ಈ ಬಗ್ಗೆ ಸ್ಪಷ್ಟೀಕರಿಸುವುದೇನೆಂದರೆ, ಮಾನ್ಯತೆ ಪಡೆಯದ ಆಸ್ಪತ್ರೆಗಳಲ್ಲಿ ಸರ್ಕಾರಿ ನೌಕರರ ಮತ್ತು ಅವರ ಕುಟುಂಬದವರು ತುರ್ತು ಸಂದರ್ಭಗಳಲ್ಲಿ ಪಡೆದ ಚಿಕಿತ್ಸೆಯ ವೆಚ್ಚದ ಅರ್ಹತಾ ಮೊತ್ತ ರೂ. 2.00 ಲಕ್ಷ ಮೀರಿದ ಪ್ರಕರಣಗಳಲ್ಲಿ ಸಿ.ಆ.ಸು. ಇಲಾಖೆಯು ಹೊರಡಿಸಿರುವ ದಿನಾಂಕ:05-11-2014ರ ಆದೇಶದಂತೆ ಸಿ.ಆ.ಸು.ಇಲಾಖೆಯ ಅನುಮೋದನೆ ಪಡೆದು ಇಲಾಖೆಗಳೇ ಇತ್ಯರ್ಥಪಡಿಸಬಹುದೆಂದು ಅದಕ್ಕೆ ಪ್ರತ್ಯೇಕವಾಗಿ ಆರ್ಥಿಕ ಇಲಾಖೆಯ ಅನುಮೋದನೆ ಪಡೆಯುವ ಅಗತ್ಯವಿಲ್ಲವೆಂದು ಈ ಮೂಲಕ ತಿಳಿಸಲಾಗಿದೆ.

(ದೀಪ್ತಿ ಆದಿತ್ಯ ಕಾನಡೆ)
ಸರ್ಕಾರದ ಉಪ ಕಾರ್ಯದರ್ಶಿ,
ಆರ್ಥಿಕ ಇಲಾಖೆ (ಆ ಮತ್ತು ಸಂ).

ಮ.ತಿ.ನೋ.

ಇವರಿಗೆ:-

1) ಮಹಾಲೇಖಪಾಲರು, ಕರ್ನಾಟಕ, ಬೆಂಗಳೂರು.
2) ಸರ್ಕಾರದ ಮುಖ್ಯ ಕಾರ್ಯದರ್ಶಿ.
3) ಸರ್ಕಾರದ ಎಲ್ಲಾ ಅಪರ ಮುಖ್ಯ ಕಾರ್ಯದರ್ಶಿಗಳು.
4) ರಾಜ್ಯಪಾಲರ ಪ್ರಧಾನ ಕಾರ್ಯದರ್ಶಿ.
5) ಮುಖ್ಯಮಂತ್ರಿಯವರ ಕಾರ್ಯದರ್ಶಿಗಳು.
6) ಸರ್ಕಾರದ ಎಲ್ಲಾ ಪ್ರಧಾನ ಕಾರ್ಯದರ್ಶಿ/ಕಾರ್ಯದರ್ಶಿಗಳು.
7) ಪ್ರಧಾನ ಕಾರ್ಯದರ್ಶಿ, ಕರ್ನಾಟಕ ವಿಧಾನ ಮಂಡಲ.
8) ಕಾರ್ಯದರ್ಶಿ, ಕರ್ನಾಟಕ ವಿಧಾನ ಸಭೆ/ಪರಿಷತ್ತು.
9) ನಿವಾಸಿ ಆಯುಕ್ತರು, ಕರ್ನಾಟಕ ಭವನ, ಕೌಟಿಲ್ಯ ಮಾರ್ಗ್, ಚಾಣಕ್ಯಪುರಿ, ನವದೆಹಲಿ-110 011.
10) ಎಲ್ಲಾ ಇಲಾಖಾ ಮುಖ್ಯಸ್ಥರು.
11) ಎಲ್ಲಾ ಪ್ರಾದೇಶಿಕ ಆಯುಕ್ತರು.
12) ಎಲ್ಲಾ ಜಿಲ್ಲೆಗಳ ಜಿಲ್ಲಾಧಿಕಾರಿಗಳು / ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು ಜಿಲ್ಲಾ ಪಂಚಾಯತ್
13) ಆಯುಕ್ತರು, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸೇವೆಗಳು, ಬೆಂಗಳೂರು.
14) ರಾಜ್ಯದ ಜಿಲ್ಲಾ ಆಸ್ಪತ್ರೆಗಳ ಎಲ್ಲಾ ಜಲ್ಲಾ ವೈದ್ಯಾಧಿಕಾರಿಗಳು.
15) ಮಹಾ ನಿಂಬಧಕರು, ಕರ್ನಾಟಕ ಉಚ್ಚ ನ್ಯಾಯಾಲಯ, ಬೆಂಗಳೂರು.
16) ನಿಬಂಧಕರು, ಕರ್ನಾಟಕ ಆಡಳಿತ ನ್ಯಾಯ ,ಮಂಡಳಿ, ಬಿಡಿಎ ವಾಣಿಜ್ಯ ಸಂಕೀರ್ಣ, ಇಂದಿರಾನಗರ, ಬೆಂಗಳೂರು-560 038.
17) ನಿಬಂಧಕರು, ಕರ್ನಾಟಕ ಲೋಕಾಯುಕ್ತ, ಬೆಂಗಳೂರು.
18) ಕಾರ್ಯದರ್ಶಿ, ಕರ್ನಾಟಕ ಲೋಕಸೇವಾ ಆಯೋಗ, ಬೆಂಗಳೂರು.
19) ಸರ್ಕಾರದ ಎಲ್ಲಾ ಅಪರ/ಜಂಟಿ/ಉಪ/ಅಧೀನ ಕಾರ್ಯದರ್ಶಿಗಳು.
20) ಅಧ್ಯಕ್ಷರು, ಕರ್ನಾಟಕ ರಾಜ್ಯ ಸರ್ಕಾರಿ ನೌಕರರ ಸಂಘ, ಬೆಂಗಳೂರು.
21) ಶಾಖಾ ರಕ್ಷಾ ಕಡತ / ಬಿಡಿ ಪ್ರತಿಗಳು.

## ಹಿಂಬರಹ

**ಸಂಖ್ಯೆ: ಡಿಟಿಇ 2 ಇಎಸ್‌ಟಿ(9) 2015** 11901 **ದಿನಾಂಕ: 14-09-2015**

ದಿನಾಂಕ:25.8.2015 ರ ಸರ್ಕಾರಿ ಸುತ್ತೋಲೆ ಸಂಖ್ಯೆ: ಆಇ 06 ಟಿಎಫ್‌ಪಿ 2014 ರ ಪ್ರತಿಯನ್ನು ಮಾಹಿತಿಗಾಗಿ ಈ ಕೆಳಕಂಡವರಿಗೆ ಕಳುಹಿಸಿಕೊಡಲಾಗಿದೆ.

1. ಈ ಇಲಾಖೆಯ ಅಧೀನಕ್ಕೊಳಪಡುವ ಎಲ್ಲಾ ಸರ್ಕಾರಿ ಇಂಜಿನಿಯರಿಂಗ್ ಕಾಲೇಜುಗಳು, ಸರ್ಕಾರಿ ಪಾಲಿಟೆಕ್ನಿಕ್, ಸರ್ಕಾರಿ ಕಿರಿಯ ತಾಂತ್ರಿಕ ಶಾಲೆಗಳು, ಸ್ಪೆರಿಕ್ ಸಂಸ್ಥೆ, ಬೆಂಗಳೂರು, ಸರ್ಕಾರಿ ಗಣಿ ಶಿಕ್ಷಣ ಶಾಲೆ, ಕೆ.ಜಿ.ಎಫ್ ಚಿತ್ರಕಲಾ ಮಹಾವಿದ್ಯಾಲಯಗಳು ಸಂಸ್ಥೆಗಳ ಪ್ರಿನ್ಸಿಪಾಲರುಗಳಿಗೆ ಮಾಹಿತಿಗಾಗಿ [ಇಲಾಖಾ ವೆಬ್‌ಸೈಟ್ ಮುಖಾಂತರ]
2. ಈ ನಿರ್ದೇಶನಾಲಯದ ಎಲ್ಲಾ ಅಧಿಕಾರಿಗಳಿಗೆ, ಜಂಟಿ ನಿರ್ದೇಶಕರು(ಆಡಳಿತ), ಆಡಳಿತಾಧಿಕಾರಿ, ಸಹಾಯಕ ಆಡಳಿತಾಧಿಕಾರಿ (1), (2) ಹಾಗೂ (3), ಸಾರ್ವಜನಿಕ ಸಂಪರ್ಕಾಧಿಕಾರಿ ಹಾಗೂ ರಿಜಿಸ್ಟ್ರಾರ್ (ಆಡಳಿತ) ಮಾಹಿತಿಗಾಗಿ
3. ನಿರ್ದೇಶಕರ ಆಪ್ತ ಶಾಖೆಗೆ
4. ಈ ನಿರ್ದೇಶನಾಲಯದ ಇಎಸ್‌ಟಿ (8) ಎ ವಿಭಾಗಕ್ಕೆ ಇವರ ಮಾಹಿತಿಗಾಗಿ
5. ಈ ನಿರ್ದೇಶನಾಲಯದ ಇ-ಆಡಳಿತ ವಿಭಾಗಕ್ಕೆ ಮಾಹಿತಿ ಹಾಗೂ ಮುಂದಿನ ಸೂಕ್ತ ಕ್ರಮಕ್ಕಾಗಿ

ಆಡಳಿತಾಧಿಕಾರಿ

Sh-est(9) Endsmnt